ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

# ಪ್ರಕಟಣೆ

ಸಂಖ್ಯೆ : ಇಡಿ/ಕೆಇಎ/ಆಡಳಿತ/ಸಿ.ಆರ್.04/2023(ಕೆಕೆ) ದಿನಾಂಕ: 17.05.2024
ಸಂಖ್ಯೆ : ಇಡಿ/ಕೆಇಎ/ಆಡಳಿತ/ಸಿ.ಆರ್.04/2023(ಆರ್‌ಪಿಸಿ) ದಿನಾಂಕ: 17.05.2024

ಕರ್ನಾಟಕ ಸರ್ಕಾರದ ಕಂದಾಯ ಇಲಾಖೆಯ ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳಿಗೆ ನೇರ ನೇಮಕಾತಿ ಸಂಬಂಧ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ದಿನಾಂಕ 20.02.2024 ರಂದು ವಿವರವಾದ ಅಧಿಸೂಚನೆಯನ್ನು ಪ್ರಕಟಿಸಲಾಗಿರುತ್ತದೆ. ಪ್ರಾಧಿಕಾರದ ಅಧಿಸೂಚನೆಯಲ್ಲಿ ದಿನಾಂಕ 03.04.2024 ರವರೆಗೆ ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗಿರುತ್ತದೆ. ಆದರೆ ಆನ್‌ಲೈನ್ ಅರ್ಜಿಯಲ್ಲಿ ಕೆಲವು ಬದಲಾವಣೆಯ ಕಾರಣ ಅರ್ಜಿಯನ್ನು ಸಲ್ಲಿಸಲು ದಿನಾಂಕವನ್ನು ಮುಂದೂಡಿ, ದಿನಾಂಕ 04.05.2024 ರ ವರೆಗೆ ಅರ್ಜಿ ಸಲ್ಲಿಸಲು ಹಾಗೂ ದಿನಾಂಕ 07.05.2024 ರ ವರೆಗೆ ಶುಲ್ಕ ಪಾವತಿಸಲು ಅವಕಾಶ ನೀಡಲಾಗಿರುತ್ತದೆ. ಆದರೆ ಕೆಲವು ಅಭ್ಯರ್ಥಿಗಳು ಪ್ರಾಧಿಕಾರಕ್ಕೆ ಮನವಿ ಸಲ್ಲಿಸಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ದಿನಾಂಕ ವಿಸ್ತರಿಸಲು ಕೋರಿದ್ದರಿಂದ ಅರ್ಜಿ ಸಲ್ಲಿಕೆಗೆ ದಿನಾಂಕ 15.05.2024 ಮತ್ತು 18.05.2024 ವರೆಗೆ ಕಾಲಾವಕಾಶ ನೀಡಲಾಗಿತ್ತು.

ಆದರೆ ಕೆಲವು ಅಭ್ಯರ್ಥಿಗಳು ಶುಲ್ಕ ಪಾವತಿಗೆ ದಿನಾಂಕ ವಿಸ್ತರಿಸಲು ಪ್ರಾಧಿಕಾರಕ್ಕೆ ಮನವಿ ಸಲ್ಲಿಸಿದ ಹಿನ್ನಲೆಯಲ್ಲಿ, ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಕೆಯನ್ನು ಪೂರ್ಣಗೊಳಿಸಿ ಶುಲ್ಕ ಪಾವತಿಸದಿರುವ ಅಭ್ಯರ್ಥಿಗಳು **ದಿನಾಂಕ: 22.05.2024 (ಬ್ಯಾಂಕ್ ಕೆಲಸದ ವೇಳೆ ವರೆಗೆ)** ರೊಳಗಾಗಿ ಶುಲ್ಕ ಪಾವತಿಸಲು ದಿನಾಂಕವನ್ನು ವಿಸ್ತರಿಸಲಾಗಿದೆ.

ಕಾರ್ಯನಿರ್ವಾಹಕ ನಿರ್ದೇಶಕರು

18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012
18th Cross, Sampige Road, Malleshwaram, Bengaluru - 560 012.
Phone: 080 - 23 564 583, 23 460 460, 23 361 786, Fax: 080 - 23 461 576
e-mail : keauthority-ka@nic.in Website : http://kea.kar.nic.in